## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ,ತಾಲ್ಲೂಕು ಪಂಚಾಯತಿ ಮುಳಬಾಗಿಲು, ಕೋಲಾರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರು,ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರಿಗೆ ವಹಿಸುವ ಬಗ್ಗೆ.

ಓದಲಾಗಿದೆ:1. ಮಾನ್ಯ ಉಪ ಲೋಕಾಯುಕ್ತರು, ಇವರ ಕರ್ನಾಟಕ-ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿ ಸಲ್ಲಿಸಿರುವ ವರದಿ ದಿ:13-07-2015.
2. ಅಪರ ನಿಬಂಧಕರು, ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೆಂಟ್/ ಉಪಲೋಕ್/ಬಿಡಿ/414/ 2011/ಎಆರ್‌ಇ-7 ದಿನಾಂಕ:14-07-2015.

---

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಪತ್ರದ ಜೊತೆಗೆ ಅಪರ ನಿಬಂಧಕರು, ವಿಚಾರಣೆಗಳು-7 ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪ ಲೋಕಾಯುಕ್ತರು ಇವರ ಕಲಂ 12(3) ರ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕರು ಇವರ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು ಕೈಗೊಂಡ ಕ್ರಮದ ಬಗ್ಗೆ ಸರ್ಕಾರದ ನಿರ್ಣಯವನ್ನು ತಿಳಿಸುವಂತೆ ಕೋರಿರುತ್ತಾರೆ.

ಶ್ರೀ ಎಸ್. ನಾರಾಯಣ ಸ್ವಾಮಿ, ಬಿನ್ ಶ್ರೀ ರಾಮ ನಿರ್ಣಯ ಕನ್ನಡ ವಾರ ಪತ್ರಿಕೆ ಎಂಬುವವರು ಸಲ್ಲಿಸಿದ ದೂರಿಗೆ ಸಂಬಂಧಿಸಿದಂತೆ, ಲೋಕಾಯುಕ್ತ ಕಛೇರಿಯು ತನಿಖೆ ಕೈಗೊಂಡು ಸಲ್ಲಿಸಿದ ವರದಿಯನುಸಾರ ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಮುಳಬಾಗಿಲು ಇವರು ಕ್ರಾಸ್ ಚೆಕ್ ನೀಡದೇ ಓಪನ್ ಚೆಕ್ ನೀಡುವ ಮೂಲಕ ಮತ್ತು ರೂ. 50,000/- ಗಳನ್ನು ಸೆಲ್ಫ್ ಚೆಕ್ ಮೂಲಕ ಪಡೆದು ನಗದು ರೂಪದಲ್ಲಿ ಪಾವತಿಸಿ, ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 72(ಎ) ನಿಯಮವನ್ನು ಉಲ್ಲಂಘಿಸಿರುವುದರಿಂಧ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ-11 ರಡಿ ಇಲಾಖಾ ವಿಚಾರಣೆ ನಡೆಸಲು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರನ್ವಯ ವರದಿಯನ್ನು ಸಲ್ಲಿಸಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪ ಲೋಕಾಯುಕ್ತರ ವರದಿ, ಲೋಕಾಯುಕ್ತ ಕಛೇರಿಯ ತಾಂತ್ರಿಕ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿದೆ. ಲೋಕಾಯುಕ್ತ ಕಛೇರಿಯು ತನಿಖೆ ಕೈಗೊಂಡು ಸಲ್ಲಿಸಿದ ವರದಿಯನುಸಾರ ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮುಳಬಾಗಿಲು ಇವರು ಕ್ರಾಸ್ ಚೆಕ್ ನೀಡದೇ ಓಪನ್ ಚೆಕ್ ನೀಡುವ ಮೂಲಕ ಮತ್ತು ರೂ. 50,000/- ಗಳನ್ನು ಸೆಲ್ಫ್-ಚೆಕ್ ಮೂಲಕ ಪಡೆದು ನಗದು ರೂಪದಲ್ಲಿ ಪಾವತಿಸಿ, ಕರ್ನಾಟಕ ಆರ್ಥಿಕ ಸಂಹಿತೆ ಅನುಚ್ಛೇದ 72(ಎ) ಅನ್ನು ಉಲ್ಲಂಘಿಸಿರುವುದು ಕಂಡು ಬಂದಿದ್ದು, ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮುಳಬಾಗಿಲು ಇವರು ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ನಿಷ್ಠೆಯನ್ನು ತೋರಿಸದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3(1) ರ (i), (ii), (iii) ಅನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಸದರಿ ಕರ್ತವ್ಯ ಲೋಪದ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಅವಶ್ಯವೆಂದು ಕಂಡು ಬಂದಿರುತ್ತದೆ.

ಆದ್ದರಿಂದ ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ , ತಾಲ್ಲೂಕು ಪಂಚಾಯತಿ, ಮುಳಬಾಗಿಲು ಇವರ ವಿರುದ್ಧದ ಆರೋಪದ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಂತೆ ನಡೆಸುವ ಸಲುವಾಗಿ, ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ) ರಂತೆ ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 183 ವಿಸೇಬಿ 2015 ಬೆಂಗಳೂರು ದಿನಾಂಕ:14-08-2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಸಂಜಪ್ಪ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ , ತಾಲ್ಲೂಕು ಪಂಚಾಯತಿ, ಮುಳಬಾಗಿಲು ಇವರ ವಿರುದ್ಧದ ಆರೋಪದ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 11 ರಂತೆ ನಡೆಸುವ ಸಲುವಾಗಿ, ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ) ರಂತೆ ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ.ಬಿ & ಸಿ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ: 1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಅಪರ ನಿಬಂಧಕರು, ವಿಚಾರಣೆಗಳು-7 ಮಾನ್ಯ ಕರ್ನಾಟಕ ಲೋಕಾಯುಕ್ತ ರವರ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ

**ಪ್ರತಿಗಳು ಮಾಹಿತಿಗಾಗಿ :**

4. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.